ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಗ್ರಾಮ ವಿಕಾಸ ಯೋಜನೆ

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

61(586) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಗ್ರಾಮ ವಿಕಾಸ ಯೋಜನೆ ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ಅದರ ರೂಪುರೇಷೆಗಳೇನು;

(ಆ) ಈ ಯೋಜನೆಯಲ್ಲಿ ಗ್ರಾಮಗಳ ಆಯ್ಕೆಯನ್ನು ಮಾಡುವ ನಿರ್ಧಾರವನ್ನು ಯಾರು ಕೈಗೊಳ್ಳುತ್ತಾರೆ;

(ಇ) ಶಾಸಕರಿಗೆ ಗ್ರಾಮಗಳನ್ನು ಆಯ್ಕೆ ಮಾಡುವ ಅಧಿಕಾರ ಇದ್ದರೂ ವಿಧಾನ ಪರಿಷತ್ತಿನ ಸದಸ್ಯರಿಗೆ ಅವಕಾಶ ನೀಡದಿರುವುದು ನಿಜವೇ; ಶಾಸಕರಲ್ಲಿ ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನ ಸದಸ್ಯರಲ್ಲಿ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇನ್ನು ಮುಂದಾದರೂ ಈ ತಾರತಮ್ಯವನ್ನು ಹೋಗಲಾಡಿಸಿ ಶಾಸಕರನ್ನು ಸಮಾನವಾಗಿ ಕಾಣಲು ಕ್ರಮಕೈಗೊಳ್ಳಲಾಗುವುದೇ?